# ಮುಖ್ಯ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಯಾದಗಿರಿ

## ಸಿ.ಸಿ. ನಂ. 776 / 2021

ಸಿಡಬ್ಲ್ಯೂ- 05
ಪಿಡಬ್ಲ್ಯೂ-05

ದಿನಾಂಕಃ 09.01.2025.

ಸಾಕ್ಷಿಗೆ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು

| | | |
|---|---|---|
| ಸಾಕ್ಷಿಯ ಹೆಸರುಃ | - | ಮಹ್ಮದ್ ರಫಿಕ್ |
| ತಂದೆಯ/ಗಂಡನ ಹೆಸರುಃ | - | ಹುಸೇನ್ ಖಾನ್ |
| ವಯಸ್ಸುಃ | -? | 23 ವರ್ಷ |
| ಉದ್ಯೋಗಃ | - | ಆಟೋ ಚಾಲಕ. |
| ವಾಸಸ್ಥಳಃ | - | ಉಲ್ಲಂಡಗೇರಿ. |

ಮುಖ್ಯ ವಿಚಾರಣೆಃ ಸ.ಸ.ಅ. ರವರಿಂದಃ

ಚಾಸಾ-4 ರವರ ಪರಿಚಯ ನನಗೆ ಇರುತ್ತದೆ. ಆರೋಪಿತನನ್ನು ನಾನು ನೋಡಿರುವುದಿಲ್ಲ. ಸಾಕ್ಷಿಯು ತಾನು ಹಚ್ಚೆಟ್ಟಿನ ದಾಖಲೆಯನ್ನು ನೋಡಿ ಗುರುತಿಸಿದ್ದು ಅದನು ಅಮಾನತುಪಡಿಸಿದ ಮಾಲುಗಳ ಜ್ಞಾಪನ ಪತ್ರ ಆಗಿರುತ್ತದೆ ಅದನ್ನು ಈಗಾಗಲೇ ನಿಪಿ 4 ಎಂದು ಗುರುತಿಸಲಾಗಿರುತ್ತದೆ. ಕಳೆದ 2 ವರ್ಷಗಳ ಹಿಂದೆ ನಿಪಿ 4 ರ ಮೇಲೆ ಸಹಿಯನ್ನು ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಪೊಲೀಸರು ಸಹಿ ಮಾಡು ಎಂದು ಹೇಳಿದ ಕಾರಣ ನಾನು ಸಹಿ ಮಾಡಿರುತ್ತೇನೆ. ನಂತರ ನನ್ನ ಪೋಟೋವನ್ನು ತೆಗೆದಿರುತ್ತಾರೆ. ನಿಪಿ 4 ರಲ್ಲಿ ಬರೆದಿರುವ ವಿಷಯ ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಮಾಡಿರುವುದಿಲ್ಲ ಮತ್ತು ವಾಹನವನ್ನು ಜಪ್ತಿಪಡಿಸಿಕೊಂಡಿರುವುದಿಲ್ಲ. ಸಾಕ್ಷಿಯು ಎರಡು ಪೋಟೋಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಈಗಾಗಲೇ ನಿಪಿ2 ಮತ್ತು 3 ಎಂದು ಗುರುತಿಸಲಾಗಿರುತ್ತದೆ. ನಿಪಿ 2 ಮತ್ತು 3 ರಲ್ಲಿ ತಾನು ಇರುವುದನ್ನು ನೋಡಿ ಗುರುತಿಸಿರುತ್ತಾರೆ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲಕರ ಸಾಕ್ಷ್ಯವನ್ನು ನುಡಿದ ಕಾರಣ ಸ.ಸ.ಅಭಿಯೋಜಕರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. )

<u>ಪಾಟೀ ಸವಾಲುಃ ಸ.ಸ.ಅ ರವರಿಂದಃ</u>

ದಿನಾಂಕಃ 22.10.2021 ರಂದು ನನ್ನನ್ನು ಮತ್ತು ಚಾಸಾ-4 ರವರನ್ನು ಪೊಲೀಸರು ಪಂಚನಾಮೆಯ ಸಲುವಾಗಿ ಪೊಲೀಸ್ ಠಾಣೆಗೆ ಕರೆದಿದ್ದರು ಎಂದರೆ ಸರಿ. ಆರೋಪಿತನು ಹಾಜರುಪಡಿಸಿದ ಬುಲರೋ ಪೀಕ್ ಆಫ್ ಗುಡ್ಸ್ ವಾಹನ ಸಂಖ್ಯೆ ಕೆಎ-32-ಸಿ-9812 ನೇದ್ದನ್ನು ನನ್ನ ಮತ್ತು ಚಾಸಾ-4 ರವರ ಸಮಕ್ಷಮ ಪೋಲಿಸರು ಪಂಚನಾಮೆಯನ್ನು ಮಾಡಿ ಜಪ್ತಿಪಡಿಸಿಕೊಂಡಿದ್ದರು ಎಂದರೆ ಸರಿ. ಪೊಲೀಸರು ಸದರಿ ಪಂಚನಾಮೆಯನ್ನು ಬೆಳಗ್ಗೆ 10 ಗಂಟೆಯಿಂದ 11 ಗಂಟೆಯ ವರೆಗೆ ಮಾಡಿ ನಮ್ಮಗೆ ಓದಿ ಹೇಳಿ ನಮ್ಮ ಸಹಿಗಳನ್ನು ಪಡೆದುಕೊಂಡಿದ್ದರು ಎಂದರೆ ಸರಿ. ಪಂಚನಾಮೆಯನ್ನು ಮಾಡುವ ಕಾಲಕ್ಕೆ ನನ್ನೊಂದಿಗೆ ಚಾಸಾ-4, ಆರೋಪಿ ಮತ್ತು ಪೊಲೀಸರೊಂದಿಗೆ ನಿಪಿ 2 ಮತ್ತು 3 ರಂತೆ ಪೋಟೋಗಳನ್ನು ತೆಗೆದಿರುತ್ತಾರೆ ಎಂದರೆ ಸರಿ. ಆ ದಿನ ವಾಹನ ಹಾಜರುಪಡಿಸಿದ ವ್ಯಕ್ತಿಯು ಈಗ ನ್ಯಾಯಾಲಯದ ಮುಂದೆ ಹಾಜರು ಇರುತ್ತಾನೆ.

ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ.ಎಸ್.ಎಸ್.ಪಿ. ರವರಿಂದಃ

ನಾನು ಶಾಲೆಯನ್ನು ಕಲಿತ್ತಿರುವುದಿಲ್ಲ ಎಂದರೆ ಸರಿ. ಪಂಚನಾಮೆಯಲ್ಲಿ ಬರೆದಿರುವ ವಿಷಯಗಳು ನನಗೆ ಗೊತ್ತಿರುವುದಿಲ್ಲ ಎಂದರೆ ಸರಿ. ಪೊಲೀಸರು ನನಗೆ ಕರೆದ್ದಾಗ ನಾನು ಪೊಲೀಸ್ ಠಾಣೆಯಲ್ಲಿ ಇದ್ದೆ. ನಾನು ಪೊಲೀಸ್ ಠಾಣೆಗೆ ಬರುವಷ್ಟರಲ್ಲಿ ಚಾಸಾ-4 ರವರು ಪೊಲೀಸ್ ಠಾಣೆಯಲ್ಲಿ ಇದ್ದರು. ನನಗೆ ಕರೆದ ಪೊಲೀಸ ಹೆಸರು ನನಗೆ ಗೊತ್ತಿರುವುದಿಲ್ಲ. ಆ ದಿನ ನಾವು ಪೊಲೀಸ ಠಾಣೆಯಲ್ಲಿ 10-15 ನಿಮಿಷ್ಯ ಇದ್ದೇವು ಎಂದರೆ ಸರಿ. ಅದೇ ರೀತಿ ಚಾಸಾ-4 ರವರು ಸಹ 10-15 ನಿಮಿಷ್ಯದ ವರೆಗೆ ಇದ್ದು ಆತನು ಹೋದನ್ನು. ದಿನಾಂಕಃ 22.10.2021 ರಂದು ನನಗೆ ಮತ್ತು ಚಾಸಾ-4 ರವರಿಗೆ ಪೊಲೀಸರು ಕರೆದು ನಿಪಿ 4 ರಂತೆ ನಮ್ಮ ಸಮಕ್ಷಮ ಪಂಚನಾಮೆಯನ್ನು ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ 4 ನ್ನು ತಯಾರಿಸಿದ್ದಾಗ ನನ್ನ ಮತ್ತು ಚಾಸಾ-4 ರವರ ಪೋಟೋಗಳನ್ನು ತೆಗೆದಿರುವುದಿಲ್ಲ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಮಾಡದೇ ಇದ್ದರು ಸಹ ನಾನು ಪಂಚನಾಮೆಯನ್ನು ಮಾಡಿರುತ್ತಾರೆ ಎಂದು ನಾನು ಸುಳ್ಳು ಸಾಕ್ಷ್ಯ ಹೇಳಿರುತ್ತೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆಃ ಇಲ್ಲಃ</u>

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚುಗಾರನಿಂದ ಬೆರಳಚ್ಚು ಮಾಡಿಸಲಾಯಿತು)

**ಓ. ಹೇ. ಕೇ. ಸರಿ ಅದೆ.**

ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು,
ಯಾದಗಿರಿ.